# ಕೆಪಿಎಲ್: ವಾರಿಯರ್ಸ್ ತಂಡಕ್ಕೆ ಆಯ್ಕೆ


ನಂದಕಿಶೋರ್


ಎನ್.ಶ್ರೇಯಸ್

ಮೈಸೂರು: ಕೆಪಿಎಲ್ ಟ್ವೆಂಟಿ-20 ಕ್ರಿಕೆಟ್ ಟೂರ್ನಿಯ ಐದನೇ ಆವೃತ್ತಿಗೆ ಮೈಸೂರು ವಾರಿಯರ್ಸ್ ತಂಡಕ್ಕೆ ಜೋಜೊ ಕ್ಲಬ್‌ನ ನಂದಕಿಶೋರ್ ಹಾಗೂ ಎಂಯುಸಿಎಸ್‌ಸಿ ಕ್ಲಬ್‌ನ ಎನ್.ಶ್ರೇಯಸ್ ಆಯ್ಕೆಯಾಗಿದ್ದಾರೆ.

ಮೈಸೂರು ವಲಯದಿಂದ ಇಬ್ಬರು ಆಟಗಾರರನ್ನು ಆಯ್ಕೆ ಮಾಡಲು ಗಂಗೋತ್ರಿ ಗ್ಲೇಡ್ಸ್ ಕ್ರೀಡಾಂಗಣದಲ್ಲಿ ಈಚೆಗೆ ಆಯ್ಕೆ ಟ್ರಯಲ್ಸ್ ನಡೆದಿತ್ತು.

ಟ್ರಯಲ್ಸ್‌ನಲ್ಲಿ ಮೈಸೂರು, ಚಾಮರಾಜನಗರ, ಮಂಡ್ಯ ಹಾಗೂ ರಾಮನಗರದಿಂದ ಸುಮಾರು 92 ಕ್ರಿಕೆಟಿಗರು ಪಾಲ್ಗೊಂಡಿದ್ದರು. ಇವರಲ್ಲಿ ಉತ್ತಮ ಪ್ರದರ್ಶನ ತೋರಿದ 10 ಸಂಭವನೀಯ ಆಟಗಾರರನ್ನು ಆಯ್ಕೆ ಮಾಡಲಾಗಿತ್ತು. ಈಗ ಇಬ್ಬರು ಆಟಗಾರರನ್ನು ಅಂತಿಮಗೊಳಿಸಲಾಗಿದೆ. ಆ.25ರಿಂದ ಎಸ್‌ಜೆಸಿಇ ಕ್ರೀಡಾಂಗಣದಲ್ಲಿ ತಂಡದ ಸಿದ್ಧತಾ ಶಿಬಿರ ನಡೆಯಲಿದೆ. ಕೆಪಿಎಲ್ ಟೂರ್ನಿ ಸೆಪ್ಟೆಂಬರ್ 16ರಂದು ಗಂಗೋತ್ರಿ ಗ್ಲೇಡ್ಸ್ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ.